# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **2662** |
| 2 | ಸದಸ್ಯರ ಹೆಸರು | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | 25-03-2022 |
| 4 | ಉತ್ತರಿಸುವವರು | ಮಾನ್ಯ ರೇಷ್ಮೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |

| | **ಪ್ರಶ್ನೆಗಳು** | **ಉತ್ತರಗಳು** |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ರೇಷ್ಮೆ ಬೆಳೆಯಾಲಾಗುತ್ತಿದೆ; (ವಿವರ ನೀಡುವುದು) | ಪ್ರಸ್ತುತ ಕಲಬುರಗಿ ಜಿಲ್ಲೆಯಲ್ಲಿ 724.68 ಹೆಕ್ಟೇರ್ ಹಾಗೂ ಯಾದಗಿರಿ ಜಿಲ್ಲೆಯಲ್ಲಿ 227.99 ಹೆಕ್ಟೇರ್ ಪ್ರದೇಶದಲ್ಲಿ ಹಿಪ್ಪುನೇರಳೆ ವಿಸ್ತೀರ್ಣವಿರುತ್ತದೆ. |
| ಆ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ರೇಷ್ಮೆ ಬೆಳೆಯಲು ರೈತರು ಆಸಕ್ತಿ ಹೊಂದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರೇಷ್ಮೆ ಬೆಳೆಯಲು ಸರ್ಕಾರ ರೈತರಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಇಲಾಖಾ ಅಧಿಕಾರಿ / ಸಿಬ್ಬಂದಿಗಳು ಪ್ರತಿಯೊಂದು ಹಳ್ಳಿಗಳಲ್ಲಿ ಪ್ರವಾಸ ಕೈಗೊಂಡು ರೈತರೊಂದಿಗೆ ಗುಂಪು ಚರ್ಚೆ ಮಾಡಿ ರೇಷ್ಮೆ ಕೃಷಿ ಕೈಗೊಳ್ಳುವುದರಿಂದ ರೈತರು ಇತರ ಬೆಳೆಗಳಿಗಿಂತ ಅಲ್ಪಾವಧಿಯಲ್ಲಿ ಹೆಚ್ಚಿನ ಲಾಭ ಪಡೆಯಬಹುದೆಂದು ತಿಳಿಸಿ, ಇಲಾಖೆಯ ಈ ಕೆಳಕಂಡ ಕಾರ್ಯಕ್ರಮಗಳ ಕುರಿತು ರೈತರಿಗೆ ತಿಳಿಸಲಾಗುತ್ತಿದೆ.<br><br>1. ಸುಧಾರಿತ ಹಿಪ್ಪುನೇರಳೆ ತೋಟ ಬೆಳೆಯಲು, ನರ್ಸರಿ ಬೆಳೆಸಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ ಒದಗಿಸಲಾಗುತ್ತಿದೆ.<br>2. ಹಿಪ್ಪುನೇರಳೆ ತೋಟಕ್ಕೆ ಟ್ರಂಚಿಂಗ್ – ಮಲ್ಚಿಂಗ್ ಮಾಡಲು ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.<br>3. ಹಿಪ್ಪುನೇರಳೆ ತೋಟಕ್ಕೆ ಹನಿ ನೀರಾವರಿ ಅಳವಡಿಕೆಗೆ ಶೇ.90ರಷ್ಟು ಸಹಾಯಧನ.<br>4. ಹಿಪ್ಪುನೇರಳೆ ತೋಟದ ಮಣ್ಣಿನ ಫಲವತ್ತತೆಗಾಗಿ ಜೈವಿಕಗೊಬ್ಬರ ಬಳಕೆಗೆ ಸಹಾಯಧನ.<br>5. ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಉತ್ತೇಜನಕ್ಕಾಗಿ ಸಹಾಯಧನ.<br>6. ರೇಷ್ಮೆ ಹುಳು ಸಾಕಾಣಿಕೆ ಮನೆ/ಮೌಂಟಿಂಗ್ ಹಾಲ್ ನಿರ್ಮಾಣಕ್ಕೆ ಸಹಾಯಧನ. |

| | | |
|---|---|---|
| | | 7. ಸೋಂಕು ನಿವಾರಕಗಳ ಪೂರೈಕೆ ಮತ್ತು ಸಲಕರಣೆಗಳಿಗೆ ಸಹಾಯಧನ ಹಾಗೂ ತಾಂತ್ರಿಕ ಮಾಹಿತಿ.<br>8. ದ್ವಿತಳಿ ಚಾಕಿ ವೆಚ್ಚಕ್ಕೆ ಸಹಾಯಧನ.<br>9. ಚಾಕಿ ಸಾಕಾಣಿಕಾ ಕೇಂದ್ರದ ಸ್ಥಾಪನೆಗೆ / ಸಲಕರಣೆಗಳಿಗೆ ಖರೀದಿಗೆ ಸಹಾಯಧನ.<br>10. ನೂತನ ತಾಂತ್ರಿಕತೆಗಳ ಅಳವಡಿಕೆಗೆ ರೈತರಿಗೆ ತರಬೇತಿ ಮತ್ತು ಕಾರ್ಯಾಗಾರ.<br>11. ರೇಷ್ಮೆ ಗೂಡಿನ ಧಾರಣೆ ಕುಸಿತ ಸಂದರ್ಭದಲ್ಲಿ ರೇಷ್ಮೆ ಬೆಳೆಗಾರರಿಗೆ ರಕ್ಷಣಾತ್ಮಕ ದರ ನೀಡಲಾಗುತ್ತಿದೆ.<br>12. ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉತ್ಪಾದಿಸುವ ದ್ವಿತಳಿ ರೇಷ್ಮೆ ಗೂಡಿಗೆ ಕೆ.ಜಿ.ಗೆ ರೂ.10/-ರಂತೆ ಸಾಗಾಣಿಕೆ ವೆಚ್ಚ ನೀಡಲಾಗುತ್ತಿದ.<br><br>ಮುಂದುವರೆದು, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ / ತೋಟ ಸ್ಥಾಪನೆ, ತೋಟ ನಿರ್ವಹಣೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಸ್ಥಾಪನೆ ಹಾಗೂ ನಿರ್ವಹಣೆ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸುವ ಯೋಜನೆ. ರೇಷ್ಮೆ ಉತ್ಪಾದನೆಯನ್ನು ವಿಸ್ತರಿಸಲು ಪ್ರಚಾರ ಕಾರ್ಯಕ್ರಮಗಳ ಮೂಲಕ ಕ್ಷೇತ್ರೋತ್ಸವ, ಕಾರ್ಯಾಗಾರ, ಪ್ರಾತ್ಯಕ್ಷತಾ ತಾಕುಗಳು, ತರಬೇತಿ, ಗುಂಪುಚರ್ಚೆ, ಭಾಗೀದಾರರ ಸಭೆಗಳು ಮುಂತಾದವುಗಳನ್ನು ಏರ್ಪಡಿಸಿ ರೈತರಲ್ಲಿ / ರೇಷ್ಮೆ ಬೆಳೆಗಾರರಲ್ಲಿ ಅರಿವು ಮೂಡಿಸಲಾಗುತ್ತಿದ |

**ರೇಷ್ಮೆ 74 ರೇಕೃವಿ 2022**

(ಡಾ. ನಾರಾಯಣಗೌಡ)
ರೇಷ್ಮೆ, ಯುವಸಬಲೀಕರಣ
ಮತ್ತು ಕ್ರೀಡಾ ಸಚಿವರು